ಕರ್ನಾಟಕ ಸರ್ಕಾರ
Government of Karnataka

ಆಡಳಿತ ತರಬೇತಿ ಸಂಸ್ಥೆ
ಲಲಿತ್ ಮಹಲ್ ರಸ್ತೆ, ಮೈಸೂರು-570011

Administrative Training Institute
Lalitha Mahal Road, Mysore-5700
Tel: 0821-2443264, 2443863, 2443831, 252

ಸಂಖ್ಯೆ: ತರಬೇತಿ/ವಿವ.63/2014-15

ದಿನಾಂಕ: 13/01/2015

## ಸುತ್ತೋಲೆ

ವಿಷಯ: ಜನನ, ಮರಣ ಮತ್ತು ನಿರ್ಜೀವ ಜನನದ ಘಟನೆಗಳ ನೋಂದಣಿಯನ್ನು ಆನ್‌ಲೈನ್ ಮುಖಾಂತರ ಮಾಡಲು ಅನುಷ್ಠಾನಾಧಿಕಾರಿಗಳು/ ಸಿಬ್ಬಂದಿಗಳಿಗೆ ಶಿರಸಿ ಜಿಲ್ಲಾ ತರಬೇತಿ ಸಂಸ್ಥೆಯಲ್ಲಿ ತರಬೇತಿ ಏರ್ಪಡಿಸುವ ಕುರಿತು ಅನುಮತಿಯನ್ನು ನೀಡುವ ಕುರಿತು.

ಉಲ್ಲೇಖ: (1) ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಅಸಾನಿ 59 ಜಮನೋ 2014(1), ದಿನಾಂಕ: 05/01/2015

(2) ಈ ಕಚೇರಿಯ ಸುತ್ತೋಲೆ ಸಂಖ್ಯೆ: ತರಬೇತಿ/ವಿವ-25/2014-15 ದಿ:09/05/2014.

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಜನನ, ಮರಣ ಮತ್ತು ನಿರ್ಜೀವ ಜನನದ ಘಟನೆಗಳ ನೋಂದಣಿಯನ್ನು ಆನ್‌ಲೈನ್ ಮುಖಾಂತರ ರಾಜ್ಯಾದ್ಯಂತ 3 ಹಂತಗಳಲ್ಲಿ ಜನವರಿ 2015 ರಿಂದ ಏಪ್ರಿಲ್ 2015ರವರೆಗೆ ರಾಜ್ಯಾದ್ಯಂತ ಉದ್ದೇಶಿಸಲಾಗಿದ್ದು, ಆ ಪ್ರಯುಕ್ತ, ಜಿಲ್ಲಾ ತರಬೇತಿ ಸಂಸ್ಥೆಗಳಲ್ಲಿ ಆನ್ ಲೈನ್ ಕಂಪ್ಯೂಟರ್ ತರಬೇತಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಅವಕಾಶ ಕಲ್ಪಿಸಬೇಕೆಂದು ಉಲ್ಲೇಖಿತ ಪತ್ರದಲ್ಲಿ ಕೋರಲಾಗಿದೆ.

ಈ ಹಿನ್ನೆಲೆಯಲ್ಲಿ; ರಾಜ್ಯದ ಜಿಲ್ಲಾ ತರಬೇತಿ ಸಂಸ್ಥೆಗಳಲ್ಲಿ (ಕಂಪ್ಯೂಟರ್ ತರಬೇತಿ ಸೌಲಭ್ಯ ಹೊಂದಿರುವ ಜಿ.ತ.ಸಂ.ಗಳು ಮಾತ್ರ) ಜನನ, ಮರಣ ಮತ್ತು ನಿರ್ಜೀವ ಜನನದ ಘಟನೆಗಳ ನೋಂದಣಿಯನ್ನು ಆನ್‌ಲೈನ್ ಮುಖಾಂತರ ಮಾಡಲು ಅನುಷ್ಠಾನಾಧಿಕಾರಿಗಳು/ ಸಿಬ್ಬಂದಿಗಳಿಗೆ ತರಬೇತಿಯನ್ನು ಏರ್ಪಡಿಸುವ ಸಂಬಂಧ ಆಯಾ ಜಿಲ್ಲೆಯ ಜಿಲ್ಲಾ ಸಂಖ್ಯಾ ಸಂಗ್ರಹಾಣಾಧಿಕಾರಿಗಳ ಸಮನ್ವಯದೊಂದಿಗೆ ತರಬೇತಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಅನುಮತಿ ನೀಡಲಾಗಿದೆ.

ಈ ತರಬೇತಿ ಕಾರ್ಯಕ್ರಮಗಳಿಗೆ ತಗಲುವ ವೆಚ್ಚವನ್ನು ಉಲ್ಲೇಖಿತ ಸುತ್ತೋಲೆಯನ್ವಯ ಸಂಬಂಧಿಸಿದ ಜಿಲ್ಲಾ ಸಂಖ್ಯಾ ಸಂಗ್ರಹಾಣಾಧಿಕಾರಿಗಳಿಂದ ಪಡೆದು ನಿಯಮಾನುಸಾರ ಉಳಿತಾಯ ಖಾತೆಗೆ ಜಮೆ ಮಾಡಲು ಸೂಚಿಸಿದೆ.

ಮಹಾ ನಿರ್ದೇಶಕರು
ಆಡಳಿತ ತರಬೇತಿ ಸಂಸ್ಥೆ, ಮೈಸೂರು

ಪ್ರತಿಯನ್ನು:-

1. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಮತ್ತು ಪದನಿಮಿತ್ತ ರಾಜ್ಯ ಕೃಷಿ ಗಣತಿ ಆಯುಕ್ತರು ಮತ್ತು ಜನನ ಮತ್ತು ಮರಣಗಳ ಮುಖ್ಯ ನೋಂದಣಾಧಿಕಾರಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು-560001- ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು (ತರಬೇತಿ), ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರಿಗೆ ಮಾಹಿತಿಗಾಗಿ.
3. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
4. ಎಲ್ಲಾ ಜಿಲ್ಲಾ ತರಬೇತಿ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಮುಂದಿನ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಾಣಾಧಿಕಾರಿಗಳು, ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಮುಂದಿನ ಕ್ರಮಕ್ಕಾಗಿ.
6. ಉಪ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರಿಗೆ ಮಾಹಿತಿಗಾಗಿ.
7. ಕಚೇರಿ ಪ್ರತಿ.